ಉದ್ಯೋಗ ಅವಕಾಶವನ್ನು ಸ್ಥಳೀಯ ಜನರಿಗೆ ನೀಡಬೇಕು) "ಹಾಗೂ ಉತ್ತೇಜನಗಳನ್ನು ವಿತರಣೆ ಮಾಡುವಾಗ ಈ ವಿಚಾರದ ಮೇಲ್ವಿಚಾರಣೆ ನೋಡಿಕೊಳ್ಳತಕ್ಕದ್ದು. ಸ್ಥಳೀಯ ಜನರಿಗೆ ಉದ್ಯೋಗ ನೀಡುವ ಅವಶ್ಯಕತೆಯನ್ನು ಜಿಲ್ಲಾ ಕೈಗಾರಿಕಾ ಕೇಂದ್ರಗಳು ೫ ವರ್ಷಗಳವರೆಗೆ ಮೇಲ್ವಿಚಾರಣೆ ಮಾಡುತ್ತವೆ. ಕೈಗಾರಿಕೆಗಳು ಸ್ಥಳೀಯ ಜನರಿಗೆ ಮೇಲೆ ತಿಳಿಸಿದ ನಿಬಂಧನೆಗನುಸಾರವಾಗಿ ಉದ್ಯೋಗ ನೀಡಲು ತಪ್ಪಿದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಅಧ್ಯಕ್ಷರಾಗಿರುವ ರಾಜ್ಯಮಟ್ಟದ ಸಮಿತಿಗೆ ತಿಳಿಸಲಾಗುವುದು. ಹಾಗೂ ಈ ಸಮಿತಿಯು ಮಂಜೂರಾದ ಬಂಡವಾಳ ಸಹಾಯ ಧನವನ್ನು ಮರುವಸೂಲಿ ಮಾಡಲು ಶಿಫಾರಸ್ಸು ಮಾಡುವುದು. ಇದಕ್ಕಾಗಿ ಸಹಾಯಧನವನ್ನು ವಿತರಣೆ ಮಾಡುವ ಮೊದಲು ಘಟಕಗಳಿಂದ ಮುಚ್ಚಳಿಕೆಯೊಂದನ್ನು ಪಡೆಯಲಾಗುವುದು. ಜೊತೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಜಮೀನು ಪಡೆದ ಘಟಕಗಳು ಭೂ ಸ್ವಾಧೀನದಿಂದಾಗಿ ಜಮೀನು ಕಳೆದುಕೊಂಡ ರೈತರ ಪ್ರತಿಯೊಂದು ಕುಟುಂಬದ ಒಬ್ಬ ಸದಸ್ಯರಿಗೆ ಉದ್ಯೋಗ ನೀಡಬೇಕೆಂಬ ನಿಬಂಧನೆಯನ್ನು ಸಹಗುತ್ತಿಗೆ ಮತ್ತು ಮಾರಾಟ ಒಪ್ಪಂದದಲ್ಲಿ ಅಳವಡಿಸಲಾಗಿದೆ. ೫೦ ಅಥವಾ ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಮತ್ತು ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಂದ ಮೂಲಭೂತ ಸೌಕರ್ಯ ಹಾಗೂ ರಿಯಾಯಿತಿಗಳನ್ನು ಪಡೆದಿರುವ ಕೈಗಾರಿಕಾ ಘಟಕಗಳಲ್ಲಿ ಮೇಲ್ಕಂಡ ಷರತ್ತಿನ ಪಾಲನೆ ಬಗ್ಗೆ ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯವರ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ರಚಿಸಲಾಗಿದೆ.

ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿರುವ ಪಶುವೈದ್ಯ ಆಸ್ಪತ್ರೆಗಳು ಹಾಗೂ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು; (ಪೂರ್ಣ ವಿವರಗಳನ್ನು ನೀಡುವುದು)

ಆ) ಬೈಲಹೊಂಗಲ ತಾಲ್ಲೂಕಿನಲ್ಲಿ ಹೊಸ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸುವ ಉದ್ದೇಶವಿದೆಯೇ;

ಇ) ಪಶು ಆಸ್ಪತ್ರೆಗಳನ್ನು ಅಗತ್ಯಕ್ಕೆ ಅನುಗುಣವಾಗಿ ವೈದ್ಯ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಪೂರ್ಣ ವಿವರಣೆಯನ್ನು ನೀಡುವುದು);

ಉ) ಸದರಿ ಹುದ್ದೆಗಳ ನೇಮಕಕ್ಕೆ ಕೈಗೊಂಡ ಕ್ರಮಗಳೇನು?

ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶು ಸಂಗೋಪನೆ ಮತ್ತು ವಕ್ಫ್ ಸಚಿವರು) :

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ ಇರುವ ವಿವಿಧ ಪಶುವೈದ್ಯಕೀಯ ಸಂಸ್ಥೆಗಳ ವಿವರ ಈ ಕೆಳಕಂಡಂತಿದೆ.

ಪಶು ಆಸ್ಪತ್ರೆ	೧
ಪಶು ಚಿಕಿತ್ಸಾಲಯ	೧೧
ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ	೧೧
ಕೃತಕ ಗರ್ಭಧಾರಣಾ ಕೇಂದ್ರಗಳು	೦೮
ಸಂಚಾರಿ ಪಶುಚಿಕಿತ್ಸಾಲಯ	೦೧
ಒಟ್ಟು	**೩೨**

ಆ) ಸರ್ಕಾರದ ಆದೇಶ ಸಂಖ್ಯೆ : ಪಸಂಮೀ ೧೧ ಪಸಸೆ ೧೯೯೯ ದಿನಾಂಕ: ೨೦-೧೧-೨೦೦೦ ರಂತೆ ಹಾಲಿ ರಾಜ್ಯದಲ್ಲಿ ಕಾಯನಿರ್ವಹಿಸುತ್ತಿರುವ ಪಶುವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಸಾಕಷ್ಟು ಇದ್ದು ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸಲು ಅಗತ್ಯತೆ ಇರುವುದಿಲ್ಲ.

ಡಾ॥ ಡಿ.ಎಂ. ನಂಜುಂಡಪ್ಪನವರ ವರದಿಯ ಪ್ರಕಾರ ರಾಜ್ಯದಲ್ಲಿ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ೬೯ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗುತ್ತದೆ.

ಇ) ಬಂದಿದೆ.

ಈ) ಬೈಲಹೊಂಗಲ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗಳ ವಿವರ :

೧	ಸಹಾಯಕ ನಿರ್ದೇಶಕರು	೧
೨	ಪಶುವೈದ್ಯಾಧಿಕಾರಿಗಳು	೬
೩	ಪಶು ವೈದ್ಯಕೀಯ ಮೇಲ್ವಿಚಾರಕರು	೨
೪	ಹಿರಿಯ ಪಶು ವೈದ್ಯಕೀಯ ಪರೀಕ್ಷಕರು	೧
೫	ಪಶು ವೈದ್ಯಕೀಯ ಸಹಾಯಕರು	೩
೬	ವಾಹನ ಚಾಲಕರು	೧
೭	ಡಿ ದರ್ಜೆ	೯
	ಒಟ್ಟು	೨೩

ಉ) ೬೦ ಪಶುವೈದ್ಯಾಧಿಕಾರಿಗಳಿಗೆ ಸರ್ಕಾರ ಆದೇಶ ಸಂಖ್ಯೆ ಪನಂಮೀ : ೨೦೭ : ಪಸಸೇ : ೦೪ ದಿನಾಂಕ ೨೪-೦೫-೨೦೦೫ ರಲ್ಲಿ ಸಹಾಯಕ ನಿರ್ದೇಶಕರಾಗಿ ಮುಂಬಡ್ತಿ ನೀಡಲಾಗಿದೆ.

ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ೧೯೧ ಪಶುವೈದ್ಯಾಧಿಕಾರಿಗಳ ಸೇವೆಯನ್ನು ಸರ್ಕಾರದ ಆದೇಶ ಸಂಖ್ಯೆ : ಪಸಂಮೀ : ೧೧೬ ಪಸಸೇ : ೦೩ ದಿನಾಂಕ ೩೦-೦೫-೨೦೦೫ರಲ್ಲಿ ಸಕ್ರಮಗೊಳಿಸಲಾಗಿದೆ ೨೫೦ ಪಶು ವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿಯ ನಿಯಮದಡಿ ಭರ್ತಿ ಮಾಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಪಶುವೈದ್ಯಕೀಯ ಮೇಲ್ವಿಚಾರಕರ ಹುದ್ದೆಗಳನ್ನು ಹಾಗೂ ಹಿರಿಯ ಪಶು ವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಇಲಾಖಾ ಮುಂಬಡ್ತಿ ಸಭೆ, ದಿನಾಂಕ ೨೯-೦೬-೨೦೦೫ ರಂದು ನಡೆಸಲಾಗಿದೆ.

ಪಶುವೈದ್ಯಕೀಯ ಪರೀಕ್ಷಕರನ್ನು ೫೦:೫೦ ನೇರನೇಕಾತಿ ಹಾಗೂ ಮುಂಬಡ್ತಿ ಮೂಲಕ ಭರ್ತಿ ಮಾಡಲು ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

೧೫೦ ಪಶುವೈದ್ಯಕೀಯ ಸಹಾಯಕರನ್ನು ಪಶುವೈದ್ಯಕೀಯ ಪರೀಕ್ಷಕರಾಗಿ ಮುಂಬಡ್ತಿ ನೀಡುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಭಾರಿ ವಾಹನ ಚಾಲನೆ ಪರವಾನಗಿ ಪಡೆದ ೧೦ ಡಿ ದರ್ಜೆ ನೌಕರರಿಗೆ ವಾಹನ ಚಾಲಕರಾಗಿ ಮುಂಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮರು ವಿನ್ಯಾಸದ ಮೂಲಕ ಹಾಗೂ ಇತರೆ ಇಲಾಖೆಗಳಿಂದ ಡಿ ದರ್ಜೆ ನೌಕರರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

೩೯೨೬ (೩೯೪೪) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ (ಕಿತ್ತೂರು) :- ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಐತಿಹಾಸಿಕ ಸ್ಥಳವಾದ ಕಿತ್ತೂರಿನಲ್ಲಿ, ಕೈಗಾರಿಕೆಗಳನ್ನು ಸ್ಥಾಪಿಸಲು ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದರೂ ಕೂಡ ಸರ್ಕಾರ ಯಾವುದೇ ಕೈಗಾರಿಕೆಗಳನ್ನು ಸ್ಥಾಪಿಸದೇ ಕಿತ್ತೂರನ್ನು ನಿರ್ಲಕ್ಷಿಸಿರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಪ್ರಸಕ್ತ ವರ್ಷದಲ್ಲಿ, ಕಿತ್ತೂರಿನಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು)

ಅ) ಸ್ಥಳೀಯ ಜನರು ಕೈಗಾರಿಕೆಗಳಲ್ಲಿ ತೊಡಗಲು ಅನುಕೂಲವಾಗುವಂತೆ ಕೈಗಾರಿಕಾ ವಿಚಾರ ಸಂಕೀರ್ಣ ಮತ್ತು ಉದ್ಯಮಶೀಲತಾ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಈ ಕಾರ್ಯಕ್ರಮಗಳಲ್ಲಿ ಸ್ಥಳೀಯ ಸಂಪನ್ಮೂಲ ಆಧಾರಿತ ಅಥವಾ ಬೇಡಿಕೆ ಆಧಾರಿತ ಕೈಗಾರಿಕಾ ಘಟಕಗಳ ಸ್ಥಾಪನೆಗೆ ಇರುವ ಅವಕಾಶಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಜೊತೆಯಲ್ಲಿ ಪ್ರತಿ ವರ್ಷವು ಜರುಗುವ ಕಿತ್ತೂರು ಉತ್ಸವ ಸಂದರ್ಭದಲ್ಲಿ ಮಾಹಿತಿ ವಿನಿಮಯ ಮಾಡಲಾಗುತ್ತದೆ ಹಾಗೂ ಸ್ಥಳೀಯ ಕರಕುಶಲ / ಕಸುಬುದಾರರಿಗೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಮಾಡಿ ಕೊಡಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ೩೦ ವಿದ್ಯಾವಂತ ಯುವಕ ಯುವತಿಯರಿಗೆ ಪ್ರಧಾನ ಮಂತ್ರಿಗಳ ರೋಜ್‌ಗಾರ್ ಯೋಜನೆಯಡಿ ಕೈಗಾರಿಕೆ / ಸೇವೆ/ವ್ಯಾಪಾರ ಘಟಕಗಳನ್ನು ಸ್ಥಾಪಿಸಲು ಆರ್ಥಿಕ ನೆರವು ನೀಡಲಾಗಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ೧೨ ಅಭ್ಯರ್ಥಿಗಳಿಗೆ ನೆರವು ನೀಡಲಾಗಿದೆ.